| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 817 |
| ಮಾನ್ಯ ಸದಸ್ಯರ ಹೆಸರು | ಶ್ರೀ.ಸಿ.ಟಿ ರವಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 16.12.2024 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಚಿಕ್ಕಮಗಳೂರು ಜಿಲ್ಲೆಯ ಸಖರಾಯಪಟ್ಟಣ ಹಾಗೂ ಕಳಸಾಪುರ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ ಈ ಪ್ರಸ್ತಾವನೆ ಯಾವ ಹಂತದಲ್ಲಿದೆ; | 2022-23 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ಹೆಚ್ಚಿನ ಕಾರ್ಯ ಒತ್ತಡವಿರುವ 100 ಪ್ರಾ.ಆ.ಕೇಂದ್ರಗಳನ್ನು 25 ಹಾಸಿಗೆಯ ಮಾದರಿ ಸ.ಆ.ಕೇಂದ್ರಗಳನ್ನಾಗಿ ಉನ್ನತೀಕರಿಸಲು ಘೋಷಿಸಲಾಗಿರುತ್ತದೆ.<br><br>ಇದರನ್ವಯ ಸ್ವೀಕೃತವಾದ ಪ್ರಸ್ತಾವನೆಯನ್ನು ಪರಿಶೀಲಿಸಿ ಆದೇಶ ಸಂಖ್ಯೆ: ಆಕುಕ 137 ಸಿಜಿಎಂ 2022 ದಿ.27.7.2022 ಹಾಗೂ ಆದೇಶ ಸಂಖ್ಯೆ: ಆಕುಕ 137 ಸಿಜಿಎಂ 2022 (ಭಾಗ-3) ದಿನಾಂಕ:23.11.2022ರಲ್ಲಿ ಒಟ್ಟು 43 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಿ ಆದೇಶ ಹೊರಡಿಸಲಾಗಿದೆ.<br><br>ಉಳಿದಂತೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು 2027ರ ಪರಿಷ್ಕೃತ ಯೋಜಿತ ಜನಸಂಖ್ಯೆಯನ್ವಯ ಮೇಲ್ದರ್ಜೆಗೇರಿಸಲು 2027ರ ಗ್ರಾಮೀಣ ಜನಸಂಖ್ಯೆ ವಿವರಗಳನ್ನು ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯಿಂದ ಪಡೆಯಲಾಗಿದೆ. 2027ರ ಗ್ರಾಮೀಣ ಜನಸಂಖ್ಯೆ ವಿವರಗಳನ್ನು ನಿಯಮಾನುಸಾರ ಪರಿಶೀಲಿಸಿ IPHS ಮಾರ್ಗಸೂಚಿಯನ್ವಯ ಕ್ರಮ ಕೈಗೊಳ್ಳಲಾಗುವುದು. |
| ಆ | ಯಾವ ಕಾಲಮಿತಿಯೊಳಗೆ ಈ ಎರಡೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲಾಗುವುದು; ಈ ನಿಟ್ಟಿನಲ್ಲಿ ಕೈ ಗೊಂಡಿರುವ ಕ್ರಮಗಳೇನು? | |

**ಸಂಖ್ಯೆ: ಆಕುಕ 141 ಎಸ್‌ಬಿವಿ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**